ಭಾವಚಿತ್ರವಿರುವ ಗುರುತಿನ ಚೀಟಿ ಇವುಗಳ ಪೈಕಿ ಯಾವುದಾದರೂ ಒಂದನ್ನು ತೋರಿಸಿ ಬಸ್ ಪ್ರಯಾಣ ದರದಲ್ಲಿ ರಿಯಾಯಿತಿ ಪಡೆಯ ಬಹುದಾಗಿದೆ.

ಇ) ದಿನಾಂಕ: 8.9.2008 ರಿಂದ ಪ್ರಯೋಜನ ಪಡೆದವರು: 1,62,70,410.

ಈ) ಇಲ್ಲ.

ಉ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

451 (775) ಶ್ರೀ ರುದ್ರೇಶ ಗೌಡ ವೈ.ಎನ್. (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ತಾಲ್ಲೂಕು ಅರೇಹಳ್ಳಿ ಗ್ರಾಮದ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗುವುದೇಯೇ?

ಆ) ಮೇಲ್ದರ್ಜೆಗೆ ಏರಿಸಲಾಗದಿದ್ದರೆ ಸಿಬ್ಬಂದಿ ವೈದ್ಯರ ನೇಮಕ ಹಾಗೂ ಕಟ್ಟಡ ನಿರ್ಮಾಣ ಇದುವರೆವಿಗೂ ಆಗಿಲ್ಲವೆಂಬುವುದು ನಿಜವೇ;

ಇ) ಇದಕ್ಕೆ ಏನು ಕಾರಣ ಸರ್ಕಾರ ಈ ಬಗ್ಗೆ ಏನು ಕ್ರಮ ತೆಗೆದುಕೊಳ್ಳುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬೇಲೂರು ತಾಲ್ಲೂಕು ಅರೇಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ದಿನಾಂಕ: 15/05/2007 ರ ಆದೇಶದಲ್ಲಿ ಮೇಲ್ದರ್ಜೆಗೇರಿಸಲಾಗಿದೆ.

ಆ) ಸದರಿ ಆಸ್ಪತ್ರೆಯು ಪ್ರಸ್ತುತ ಪ್ರಾಥಮಿಕ ಆರೋಗ್ಯ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದೆ. ಮೇಲ್ದರ್ಜೆಗೇರಿಸುವುದಕ್ಕೆ ಅನುಗುಣವಾಗಿ ಕಟ್ಟಡ ನಿರ್ಮಾಣ ಕೈಗೊಳ್ಳಲು ಇದುವರೆಗೆ ಸಾಧ್ಯವಾಗಿಲ್ಲ. ಆದುದರಿಂದ, ಸಿಬ್ಬಂದಿ ಮತ್ತು ವೈದ್ಯರ ನೇಮಕ ಇತ್ಯಾದಿ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಸ್ತುತ, 179 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಆ ಪೈಕಿ 125 ಸಮುದಾಯ ಆರೋಗ್ಯ

ಕೇಂದ್ರಗಳಿಗೆ ಸ್ವಂತ ಕಟ್ಟಡ ಲಭ್ಯವಿರುವುದಿಲ್ಲ. ಈಗಾಗಲೇ 106 ಸಮುದಾಯ ಆರೋಗ್ಯ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾರ್ಯ ಚಾಲ್ತಿಯಲ್ಲಿ ಇದೆ. 19 ಕೇಂದ್ರಗಳ ಕಟ್ಟಡ ನಿರ್ಮಾಣ ಕೈಗೊಳ್ಳಬೇಕಿದ್ದು, ಅವುಗಳ ಪೈಕಿ ಅರೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರ ಸಹ ಒಂದಾಗಿದೆ. ಹಣಕಾಸು ಲಭ್ಯತೆ ಹಾಗೂ ಆದ್ಯತೆ ಅನುಸಾರ ಇಂತಹ ಕಟ್ಟಡ ಕಾಮಗಾರಿಗಳನ್ನು ಹಂತ–ಹಂತವಾಗಿ ಕೈಗೊಳ್ಳಬೇಕಾಗುತ್ತದೆ.

ಸಾರ್ವಜನಿಕ ಆಸ್ಪತ್ರೆಯ ಕಾಮಗಾರಿ

448 (89) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕುಂಠಿತಗೊಳ್ಳಲು ಕಾರಣಗಳೇನು;

ಇ) ಜರೂರಾಗಿ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಮತ್ತು ಇ) ಗುತ್ತಿಗೆದಾರರ ನಿಧಾನಗತಿ ಪ್ರವೃತ್ತಿಯಿಂದಾಗಿ ಕಾಮಗಾರಿಯು ಕುಂಠಿತವಾಗಿದ್ದು, ಜರೂರಾಗಿ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸೂಚನೆಗಳನ್ನು ನೀಡಲಾಗಿದೆ.

449 (90) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮತ್ತು ತಾಲ್ಲೂಕಿನ ಆರೋಗ್ಯ ಸಮುದಾಯ ಭವನ ಮತ್ತು ಪ್ರಾಥಮಿಕ